# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 860 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ** | : | 13.03.2025 |
| **ಉತ್ತರಿಸುವ ಸಚಿವರು** | : | ಕಾನೂನು, ನ್ಯಾಯ, ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರವಾಸೋದ್ಯಮ ಇಲಾಖೆಯು ಸಿಬ್ಬಂದಿ ಕೊರತೆಯಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಹಾಗಿದ್ದಲ್ಲಿ ಕಳೆದ 03 ವರ್ಷಗಳ ಅವಧಿಯಲ್ಲಿ ಸರ್ಕಾರದಿಂದ ಎಷ್ಟು ಹುದ್ದೆಗಳನ್ನು ಮಂಜೂರು ಮಾಡಲಾಗಿದೆ ಮಂಜೂರು ಮಾಡಲಾಗಿರುವ ಅಷ್ಟು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆಯೇ ಅಥವಾ ಬಾಕಿ ಇದೆಯೇ: (ಮಾಹಿತಿ ಒದಗಿಸುವುದು) | ಬಂದಿದೆ.<br><br>ಪ್ರವಾಸೋದ್ಯಮ ಇಲಾಖೆಗೆ ಒಟ್ಟು 312 ಹುದ್ದೆಗಳು ಮಂಜೂರಾಗಿದ್ದು, ನೇರ ನೇಮಕಾತಿಯಡಿ ಪ್ರಥಮ ದರ್ಜೆ ಸಹಾಯಕರ-06 ಹುದ್ದೆ, ದ್ವಿತೀಯ ದರ್ಜೆ ಸಹಾಯಕರ – 06 ಹುದ್ದೆಗಳನ್ನು ಕೆ.ಪಿ.ಎಸ್.ಸಿ. ಮೂಲಕ ಭರ್ತಿ ಮಾಡಲು ಅನ್‌ಲೈನ್‌ನಲ್ಲಿ ಪ್ರಸ್ತಾವನೆಯನ್ನು ಸಲ್ಲಿಸುವ ಕಾರ್ಯ ಪ್ರಗತಿಯಲ್ಲಿರುತ್ತದೆ.<br><br>ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯಲ್ಲಿ ಕಳೆದ 03 ವರ್ಷಗಳ ಅವಧಿಯಲ್ಲಿ ಒಟ್ಟು 02 ದ್ವಿತೀಯ ದರ್ಜೆ ಸಹಾಯಕರು ಹುದ್ದೆಗಳನ್ನು ಮಂಜೂರು ಮಾಡಲಾಗಿದೆ. ಆ ಪೈಕಿ ಒಂದು ದ್ವಿತೀಯ ದರ್ಜೆ ಸಹಾಯಕ ಹುದ್ದೆಯನ್ನು ದಿನಾಂಕ 03.08.2023 ರಲ್ಲಿ ಭರ್ತಿ ಮಾಡಲಾಗಿದೆ ಹಾಗೂ ಇನ್ನೊಂದು ಹುದ್ದೆಗೆ ದಿನಾಂಕ:01-03-2025ರಂದು ನೇಮಕಾತಿ ಆದೇಶವನ್ನು ನೀಡಲಾಗಿದೆ. |
| ಆ) | ರಾಜ್ಯದಲ್ಲಿ ಪ್ರವಾಸೋದ್ಯಮ ಇಲಾಖೆಗೆ ಮಂಜೂರಾದ ಒಟ್ಟು ಹುದ್ದೆಗಳು ಎಷ್ಟು ಇದರಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ಬಾಕಿ ಹುದ್ದೆಗಳನ್ನು ಯಾವ ಕಾಲ ಮಿತಿಯೊಳಗೆ ಭರ್ತಿ ಮಾಡಲಾಗುವುದು: (ಮಾಹಿತಿ ನೀಡುವುದು) | ಪ್ರವಾಸೋದ್ಯಮ ಇಲಾಖೆಗೆ ಒಟ್ಟು 312 ಹುದ್ದೆಗಳು ಮಂಜೂರಾಗಿದ್ದು, ಇಲಾಖೆಯಲ್ಲಿ ಭರ್ತಿ ಮಾಡಲಾದ ಮತ್ತು ಖಾಲಿ ಇರುವ ಹುದ್ದೆಗಳ ವಿವರ ಕೆಳಕಂಡಂತ್ತಿದೆ. |

| ಕ್ರ ಸಂ | ವೃಂದ | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳು | ನಿಯೋಜನೆ/ಅಧಿಕ ಪ್ರಭಾರ | ಖಾಲಿ ಇರುವ ಹುದ್ದೆಗಳು |
|---|---|---|---|---|---|
| 1 | ಗ್ರೂಪ್ ಎ | 22 | 08 | 14 | 0 |
| 2 | ಗ್ರೂಪ್ ಬಿ | 29 | 08 | 16 | 5 |
| 3 | ಗ್ರೂಪ್ ಸಿ | 208 | 34 | 1 | 173 |
| 4 | ಗ್ರೂಪ್ ಡಿ | 53 | 7 | 0 | 46 |
| | **ಒಟ್ಟು** | **312** | **57** | **31** | **224** |

ಪ್ರವಾಸೋದ್ಯಮ ಇಲಾಖೆಗೆ ಒಟ್ಟು 312 ಹುದ್ದೆಗಳು ಮಂಜೂರಾಗಿದ್ದು, ನೇರ ನೇಮಕಾತಿಯಡಿ ಪ್ರಥಮ ದರ್ಜೆ ಸಹಾಯಕರ-06 ಹುದ್ದೆ, ದ್ವಿತೀಯ ದರ್ಜೆ ಸಹಾಯಕರ – 06 ಹುದ್ದೆಗಳನ್ನು ಕೆ.ಪಿ.ಎಸ್.ಸಿ. ಮೂಲಕ ಭರ್ತಿ ಮಾಡಲು ಅನ್‌ಲೈನ್‌ನಲ್ಲಿ ಪ್ರಸ್ತಾವನೆಯನ್ನು ಸಲ್ಲಿಸುವ

| | | |
|---|---|---|
| | | ಕಾರ್ಯ ಪ್ರಗತಿಯಲ್ಲಿರುತ್ತದೆ.<br><br>ಪ್ರಥಮ ದರ್ಜೆ ಸಹಾಯಕ - 8 ಹುದ್ದೆ, ದ್ವಿತೀಯ ದರ್ಜೆ ಸಹಾಯಕ- 4 ಹುದ್ದೆಗಳನ್ನು ಹಾಗೂ ಸಹಾಯಕ ನಿರ್ದೇಶಕರ– 03 ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ. ಗ್ರೂಪ್-ಸಿ(ಡೇಟಾ ಎಂಟ್ರಿ ಆಪರೇಟರ್) ಮತ್ತು ಗ್ರೂಪ್-ಡಿ ಹುದ್ದೆಗಳನ್ನು ನಿಯಮಾನುಸಾರ ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲಾಗಿದೆ.<br><br>ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯಲ್ಲಿ ಮಂಜೂರಾದ/ಭರ್ತಿ ಮಾಡಲಾದ/ಖಾಲಿ ಇರುವ ಹುದ್ದೆಗಳು ಮತ್ತು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳ ಮಾಹಿತಿಯನ್ನು **ಅನುಬಂಧ** ದಲ್ಲಿ ಒದಗಿಸಿದೆ. |
| ಇ) | ವಿಜಯಪುರ ಜಿಲ್ಲೆಯಲ್ಲಿ ಇರುವ ಸಿಬ್ಬಂದಿಗಳು ಎಷ್ಟು ಖಾಲಿ ಹುದ್ದೆಗಳು ಎಷ್ಟು ಸಿಬ್ಬಂದಿ ಕೊರತೆಯಿಂದ ಇಲಾಖೆಯ ಕಾರ್ಯ ಕುಂಠಿತವಾಗಿದ್ದು ಸರ್ಕಾರದ ಗಮನಕ್ಕೆ ಇದೆಯೇ ಇದ್ದರೆ ಸರ್ಕಾರ ಕೈಗೊಂಡ ಕ್ರಮಗಳೇನು: | ಉಪ ನಿರ್ದೇಶಕರ ಕಛೇರಿ, ಪ್ರವಾಸೋದ್ಯಮ ಇಲಾಖೆ, ವಿಜಯಪುರ ಜಿಲ್ಲೆಗೆ ಒಟ್ಟು 07 ಹುದ್ದೆಗಳು ಮಂಜೂರಾಗಿದ್ದು, 06 ಹುದ್ದೆಗಳು ಭರ್ತಿಯಾಗಿದ್ದು, 01 ಹುದ್ದೆಯು ಖಾಲಿ ಇದ್ದು, ಇಲಾಖೆಯ ಕೆಲಸ ಕಾರ್ಯಗಳು ಕುಂಠಿತವಾಗದೇ ಸುಗಮವಾಗಿ ಕಾರ್ಯ ಕೈಗೊಳ್ಳಲಾಗುತ್ತಿದೆ. |
| ಈ) | ನಿರುದ್ಯೋಗ ಯುವಕರಿಗೆ ಆಸರೆಯಾಗಿದ್ದ ಟ್ಯಾಕ್ಸಿ ಯೋಜನೆಯನ್ನು ಸರ್ಕಾರ ಕೈಬಿಟ್ಟಿದ್ದು ಯಾಕೆ; ಈ ಯೋಜನೆಯನ್ನು ಪುನರ್ ಪರಿಶೀಲನೆ ಮಾಡಿ ಮತ್ತೆ ಪ್ರಾರಂಭ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ? (ಮಾಹಿತಿ ನೀಡುವುದು) | ಪ್ರವಾಸಿ ಟ್ಯಾಕ್ಸಿ ಯೋಜನೆಯನ್ನು ಪುನರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ: TOR 73 TDV 2025**

**(ಎಚ್.ಕೆ.ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕಗಳು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು

**<u>ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ:860 ಕ್ಕೆ</u>**

**<u>ಅನುಬಂಧ</u>**

| ಕ್ರಂ ಸಂ | ವೃಂದ | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳು | ಖಾಲಿಯಿರುವ ಹುದ್ದೆಗಳು | | | ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮ |
|---|---|---|---|---|---|---|---|
| | | | | ನೇರ ನೇಮಕಾತಿ | ಮುಂಬಡ್ತಿ | ನಿಯೋಜನೆ | |
| 1 | ಗ್ರೂಪ್ ಎ | 17 | 10 | - | 5 | 2 | • ಖಾಲಿಯಿರುವ 7 ಹುದ್ದೆಗಳ ಪೈಕಿ ನಿರ್ದೇಶಕರು - 01 ಹುದ್ದೆಯನ್ನು ಮುಂಬಡ್ತಿ ಮೂಲಕ ಭರ್ತಿ ಮಾಡಲು ಮಾತೃ ವೃಂದದಲ್ಲಿ ಅಭ್ಯರ್ಥಿ ಲಭ್ಯವಿರುವುದಿಲ್ಲ. ಇಲಾಖಾ ವೃಂದ ಮತ್ತು ನೇಮಕಾತಿ ನಿಯಮದನ್ವಯ ಸದರಿ ಹುದ್ದೆಯನ್ನು ನಿಯೋಜನೆ ಮೇರೆಗೆ ಭರ್ತಿ ಮಾಡಲು ವಿಶ್ವವಿದ್ಯಾನಿಲಯಗಳಿಗೆ ದಿನಾಂಕ 10.03.2025 ರ ಪತ್ರದಲ್ಲಿ ಕೋರಲಾಗಿದೆ.<br>• ಉಪ ನಿರ್ದೇಶಕರು - 02 ಹುದ್ದೆಗಳ ಪೈಕಿ 01 ಹುದ್ದೆ ಮುಂಬಡ್ತಿ ಮೂಲಕ ಭರ್ತಿ ಮಾಡಬೇಕಾಗಿದ್ದು, ಮಾತೃ ವೃಂದದಲ್ಲಿ ಅಭ್ಯರ್ಥಿ ಲಭ್ಯವಿರುವುದಿಲ್ಲ, ಇನ್ನೊಂದು ಹುದ್ದೆಯು ಅನ್ಯ ಇಲಾಖೆಯಿಂದ ನಿಯೋಜನೆ ಮೇರೆಗೆ ಭರ್ತಿಯಾಗಬೇಕಾಗಿರುತ್ತದೆ.<br>• ಸಹಾಯಕ ನಿರ್ದೇಶಕರು-03 ಹುದ್ದೆಗಳನ್ನು ಮುಂಬಡ್ತಿ ಮೂಲಕ ಭರ್ತಿ ಮಾಡಬೇಕಾಗಿದ್ದು, ಆಯುಕ್ತರಿಂದ ಪ್ರಸ್ತಾವನೆ ನಿರೀಕ್ಷಿಸಲಾಗಿದೆ.<br>• ಪುರಾತತ್ವ ಸಂರಕ್ಷಣಾ ಇಂಜಿನಿಯರ್ - 01ಹುದ್ದೆಯನ್ನು ಇಲಾಖಾ ವೃಂದ ಮತ್ತು ನೇಮಕಾತಿ ನಿಯಮದನ್ವಯ ಸದರಿ ಹುದ್ದೆಯನ್ನು ನಿಯೋಜನೆ ಮೇರೆಗೆ ಭರ್ತಿ ಮಾಡಲು ಲೋಕೋಪಯೋಗಿ ಇಲಾಖೆಗೆ ಶಿಫಾರಸ್ಸು ಮಾಡುವಂತೆ ಕೋರಿ ಪ್ರಸ್ತಾವನೆ ಸ್ವೀಕೃತಗೊಂಡಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ. |
| 2 | ಗ್ರೂಪ್ ಬಿ | 30 | 9 | 15 | 5 | 1 | • ಖಾಲಿಯಿರುವ 15 ನೇರ ನೇಮಕಾತಿ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಕೋರಿ ಪ್ರಸ್ತಾವನೆ ಸ್ವೀಕೃತಗೊಂಡಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ.<br>• ಮುಂಬಡ್ತಿ ಮೂಲಕ ಭರ್ತಿ ಮಾಡಬೇಕಾದ 05 ಹುದ್ದೆಗಳ ಪೈಕಿ 04 ಹುದ್ದೆಗಳನ್ನು ಭರ್ತಿ ಮಾಡಲು ಮಾತೃ ವೃಂದದಲ್ಲಿ ಅಭ್ಯರ್ಥಿ ಲಭ್ಯವಿರುವುದಿಲ್ಲ. 01 ಹುದ್ದೆಗೆ |

| | | | | | | | |
|---|---|---|---|---|---|---|---|
| | | | | | | | ಶೀಘ್ರದಲ್ಲೇ ಭರ್ತಿ ಮಾಡಲು ಕ್ರಮವಹಿಸಲಾಗುವುದು.<br>• ನಿಯೋಜನೆ ಮೇರೆಗೆ ಭರ್ತಿ ಮಾಡಬೇಕಾದ 01 ಹುದ್ದೆಯನ್ನು ಲೋಕೋಪಯೋಗಿ ಇಲಾಖೆಯಿಂದ ಭರ್ತಿ ಮಾಡಲು ಅಗತ್ಯ ಕ್ರಮವಹಿಸಲಾಗುವುದು. |
| 3 | ಗ್ರೂಪ್ ಸಿ | 56 | 27 | 17 | 8 | 4 | • ಖಾಲಿಯಿರುವ 17 ನೇರ ನೇಮಕಾತಿ ಹುದ್ದೆಗಳ ಪೈಕಿ 08 ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಸರ್ಕಾರಕ್ಕೆ ದಿನಾಂಕ 26.06.2023 ರ ಪತ್ರದಲ್ಲಿ ಪ್ರಸ್ತಾವನೆ ಸಲ್ಲಿಸಲಾಗಿದೆ. ಇನ್ನೂಳಿದ 09 ಹುದ್ದೆಗಳನ್ನು ನಿಯಮಾನುಸಾರ ಹೊರಗುತ್ತಿಗೆ ಮೂಲಕ ಭರ್ತಿಮಾಡಲಾಗಿದೆ.<br>• ಮುಂಬಡ್ತಿ ಮೂಲಕ ಭರ್ತಿ ಮಾಡಬೇಕಾದ 08 ಹುದ್ದೆಗಳ ಪೈಕಿ 03 ಹುದ್ದೆಗಳನ್ನು ಭರ್ತಿ ಮಾಡಲು ಮಾತ್ರ ವೃಂದದಲ್ಲಿ ಅಭ್ಯರ್ಥಿ ಲಭ್ಯವಿರುವುದಿಲ್ಲ. 05 ಹುದ್ದೆಗೆ ಶೀಘ್ರದಲ್ಲೇ ಮುಂಬಡ್ತಿ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗುವುದು.<br>• ನಿಯೋಜನೆ ಮೇರೆಗೆ ಭರ್ತಿ ಮಾಡಬೇಕಾದ 04 ಹುದ್ದೆಯನ್ನು ನಿಯೋಜನೆ ಮೇರೆಗೆ ಭರ್ತಿ ಮಾಡಲು ಲೋಕೋಪಯೋಗಿ ಇಲಾಖೆಗೆ ಶಿಫಾರಸ್ಸು ಮಾಡುವಂತೆ ಕೋರಿ ಪ್ರಸ್ತಾವನೆ ಸ್ವೀಕೃತಗೊಂಡಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ. |
| 4 | ಗ್ರೂಪ್ ಡಿ | 116 | 25 | 91 | - | - | • ಖಾಲಿಯಿರುವ 91 ಹುದ್ದೆಗಳ ಪೈಕಿ 74 ಹುದ್ದೆಗಳನ್ನು ಸರ್ಕಾರದಿಂದ ಅನುಮತಿ ಪಡೆದು ನಿಯಮಾನುಸಾರ ಹೊರಗುತ್ತಿಗೆ ಮೂಲಕ ಭರ್ತಿಮಾಡಲಾಗಿದೆ.<br>• ಇನ್ನೂಳಿದ 17 ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಭರ್ತಿಮಾಡಲು ಅನುವಾಗುವಂತೆ ಪ್ರಸ್ತಾವನೆ ಸಲ್ಲಿಸಲು ಕೋರಲಾಗಿದ್ದು, ಆಯುಕ್ತರಿಂದ ಪ್ರಸ್ತಾವನೆ ನಿರೀಕ್ಷಿಸಲಾಗಿದೆ |
| | ಒಟ್ಟು | 219 | 71 | 123 | 18 | 7 | |